1129 ಶ್ರೀ ಬಿದನೂರ. ಎಸ್.ವಿರೂಪಾಕ್ಷಪ್ಪ (ಗದಗ) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ನಗರದಲ್ಲಿ ಪಶುವೈದ್ಯಕೀಯ ಕಾಲೇಜು ಮಂಜೂರು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕಾಲೇಜಿಗೆ ಸೂಕ್ತವಾದ ಕಟ್ಟಡವನ್ನು ಒದಗಿಸಿ 2010–2011ರ ಶೈಕ್ಷಣಿಕ ವರ್ಷದಲ್ಲಿ ಒದಗಿಸಲಾಗುವುದೇ?

ಆ) ಕಾಲೇಜು ಕಟ್ಟಡಕ್ಕೆ ಸೂಕ್ತವಾದ ಜಮೀನು ಗುರುತಿಸಲಾಗಿದ್ದು, ಜಮೀನನ್ನು ಪಡೆಯುವ ಕ್ರಮವನ್ನು ಚುರುಕುಗೊಳಿಸಲಾಗುವುದೇ?

ಇ) ಬೀದರ್‌ನ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಪೂರ್ವಭಾವಿ ಕಾರ್ಯಗಳನ್ನು ಚುರುಕುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) :

ಅ) ಬಂದಿದೆ. ಈ ಬಗ್ಗೆ ನಿಗದಿ ಪಡಿಸಿದ ಜಮೀನು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಹಸ್ತಂತರಗೊಂಡ ನಂತರ ಕಟ್ಟಡ ಕಾಮಗಾರಿಯನ್ನು ಕೈಗೊಂಡು ಕಾಲೇಜು ಕಟ್ಟಡ ಒದಗಿಸಲಾಗುವುದು.

ಆ) ಜಮೀನನ್ನು ಪಡೆಯಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಬೀದರ್ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಪೂರ್ವಭಾವಿ ಕಾರ್ಯಗಳನ್ನು ಚುರುಕುಗೊಳಿಸಲು ಅಗತ್ಯವಾದ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ.

651 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರಕ್ಕೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಳೆದ ಐದು ವರ್ಷಗಳಿಂದ ಕಾಲೇಜು ಕಟ್ಟಡದ ಕಾಮಗಾರಿಯು ಕುಂಠಿತಗೊಳ್ಳಲು ಕಾರಣಗಳೇನು;

ಇ) ಪ್ರಥಮ ದರ್ಜೆ ಕಾಲೇಜು ಕಟ್ಟಡಕ್ಕೆ ಪ್ರಸಕ್ತ ಅವಧಿಯಲ್ಲಿ ಸರ್ಕಾರ ನಿಗದಿಪಡಿಸಿದ ಅನುದಾನದ ಮೊತ್ತ ಎಷ್ಟು; (ವಿವರಗಳನ್ನು ನೀಡುವುದು);

ಈ) ಕಾಲೇಜು ಕಟ್ಟಡವು ಈವರೆವಿಗೂ ಪೂರ್ಣಗೊಳ್ಳದಿರಲು ಕಾರಣಗಳೇನು;